## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಹುದ್ದೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 335 ಬಿಎಂಎಸ್ 2012 ದಿನಾಂಕ:21.11.2012.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:KREIS/ADMN/PSAN/15/2022-ADMN, ದಿನಾಂಕ: 24.11.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಉತ್ತರ ಕರ್ನಾಟಕ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 12 ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು, 15 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 08 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳನ್ನು 2013-14ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಏಕ ಕಡತ ಪ್ರಸ್ತಾವನೆಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು 2012-13ನೇ ಸಾಲಿನಲ್ಲಿ ಮಂಜೂರಾತಿ ಮಾಡಿರುವ 26 ಹಿಂದುಳಿದ ವರ್ಗದ ವಸತಿ ಶಾಲೆಗಳ ಪೈಕಿ ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿಗೆ ಮಂಜೂರಾಗಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಅವಶ್ಯಕವಾಗಿ ಬೇಕಾಗಿರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಿ ವಸತಿ ಶಾಲೆಯನ್ನು ಪ್ರಾರಂಬಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಏಕಕಡತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮುಂದುವರೆದಂತೆ ಹುದ್ದೆಗಳಿಗೆ ಭರಿಸಬೇಕಾದ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಲೆಕ್ಕಶೀರ್ಷಿಕೆ: 2225-03-277-2-62(ರಾಜ್ಯವಲಯ-ಯೋಜನೆ)ರಡಿ ಭರಿಸಲಾಗುವುದು ಎಂದು ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 845 ಬಿಎಂಎಸ್ 2022**

**ಬೆಂಗಳೂರು, ದಿನಾಂಕ:20-12 -2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಮೊದಲ ವರ್ಷಕ್ಕೆ ಅಗತ್ಯವಿರುವ ವಿವಿಧ ವೃಂದದ ಒಟ್ಟು 09 ಹುದ್ದೆಗಳನ್ನು ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವಂತೆ ಸೃಜಿಸಲು ಸರ್ಕಾರ ಅನುಮತಿ ನೀಡಿ ಆದೇಶಿಸಿದೆ.

ಶ್ರೀ. 20/12/22

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 722 ವೆಚ್ಚ-3 2022, ದಿನಾಂಕ:12.12.2022 ಹಾಗೂ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparveen 20/12/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

20/12

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3) ವಿಧಾನಸೌಧ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಕಿತ್ತೂರು ಬೆಳಗಾವಿ ಜಿಲ್ಲೆ.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

********

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 845 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:20-12 -2022**

## ಅನುಬಂಧ

| ಕ್ರ. ಸಂ | ಹುದ್ದೆಯ ವಿವರ | ಆರ್ಥಿಕ ಇಲಾಖೆಯು ಸೃಜಿಸಲು ಸಹಮತಿಸಿದ ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1 | ಪ್ರಾಂಶುಪಾಲರು (For 6-10 std. Group-B scale or 6-12 std Group –A scale Junior Scale) | 01 | ನಿಯೋಜನೆ |
| 2 | ಪದವಿಧರ ಕನ್ನಡ ಭಾಷಾ ಶಿಕ್ಷಕರು | 01 | ನೇರ ನೇಮಕಾತಿ |
| 3 | ಪದವೀಧರ ಆಂಗ್ಲ ಭಾಷಾ ಶಿಕ್ಷಕರು | 01 | |
| 4 | ಪದವೀಧರ ಹಿಂದಿ ಭಾಷಾ ಶಿಕ್ಷಕರು | 01 | |
| 5 | ಪದವೀಧರ ಗಣಿತ ಶಿಕ್ಷಕರು | 01 | |
| 6 | ನಿಲಯ ಪಾಲಕರು | 01 | ನಿಯೋಜನೆ |
| 7 | ಅಡುಗೆಯವರು | 01 | ಹೊರಗುತ್ತಿಗೆ |
| 8 | ಅಡುಗೆ ಸಹಾಯಕರು | 01 | |
| 9 | ಕಾವಲುಗಾರರು | 01 | |
| | **ಒಟ್ಟು** | **09** | |

Shaheenparveen 20/12/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

20/12